(ಇಂದು ದಿನಾಂಕ 08.07.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಂದುವರೆದ ಮುಖ್ಯ ವಿಚಾರಣೆ:- ವಾದಿ ಪರ ವಕೀಲರಿಂದ:-**

ನನ್ನ ಹೆಚ್ಚುವರಿ ಮುಖ್ಯ ವಿಚಾರಣೆಯನ್ನು ಶಪಥ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಶಪಥ ಪತ್ರದಲ್ಲಿನ ಅಂಶಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ಮಂಜೂರಾತಿ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ನಿಪಿ 62 ಎಂದು, ನೋಂದಣಾ ಪುಸ್ತಕದ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 63 ಎಂದು, ಪ್ರಕರಣ ಸಂಖ್ಯೆ 61/1958-59 ರಲ್ಲಿ ನೋಂದಾಯಿಸಿದ ಹೇಳಿಕೆಯನ್ನು ಹಾಜರುಪಡಿಸಿದ್ದು ನಿಪಿ 64 ಎಂದು, ಮ್ಯುಟೇಶನ್ ರಿಜಿಸ್ಟರ್ ಪ್ರತಿಯನ್ನು ನಿಪಿ 65 ಎಂದು, 14 ಕೈ ಬರಹದ ಪಹಣಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 66 ರಿಂದ 79 ಎಂದು, ಗಣಕೀಕೃತ ಪಹಣಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ 80 ಎಂದು, ಪ್ರಕರಣ ಸಂಖ್ಯೆ 121 ಹಾಗೂ 123/1958-59 ರ ಆದೇಶವನ್ನು ಹಾಜರುಪಡಿಸಿದ್ದು ನಿಪಿ 81 ಎಂದು, ಮಂಜೂರಾತಿ ಪತ್ರವನ್ನು ಹಾಜರುಪಡಿಸಿದ್ದು ನಿಪಿ 82 ಎಂದು, ಪ್ರಕರಣ ಸಂಖ್ಯೆ 121 ರ ಆದೇಶವನ್ನು ಹಾಜರುಪಡಿಸಿದ್ದು ನಿಪಿ 83 ಎಂದು ನಕ್ಷೆಯನ್ನು ಹಾಜರುಪಡಿಸಿದ್ದು ನಿಪಿ 84 ಎಂದು, ಮೂಲ ಸರ್ವೆ ಪ್ರತಿಯು 2 ಹಾಳೆಗಳಲ್ಲಿ ಇದ್ದು ಅದನ್ನು ನಿಪಿ 85 ಎಂದು ಗುರುತಿಸಲಾಯಿತು.

**(ವಾಟೀ ಸವಾಲಿಗೆ ಸಮಯಾವಕಾಶ ಕೋರಿದ ಮೇರೆಗೆ ಮುಂದೂಡಲಾಯಿತು)**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಅಪರ ಹಿರಿಯ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ,
ಆನೇಕಲ್.